**Bangalore**
**Regional News**
**17.03.2025 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯದ ನೀರಾವರಿ ಯೋಜನೆಗಳಿಗೆ ಕೇಂದ್ರ ಸರ್ಕಾರ ನೀಡಿರುವುದು ೧ ಸಾವಿರದ ೩೦ ಕೋಟಿ ಮಾತ್ರ ; ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨. ರೈತರ ಪಂಪ್‌ಸೆಟ್‌ಗಳಿಗೆ ಪ್ರತಿನಿತ್ಯ ೭ ಗಂಟೆಗಳ ಕಾಲ ವಿದ್ಯುತ್ ಪೂರೈಕೆ- ಇಂಧನ ಸಚಿವ ಕೆ.ಜೆ.ಜಾರ್ಜ್

೩. ಎನ್‌ಎಸ್‌ಎಸ್ ರಾಜ್ಯ ಪ್ರಶಸ್ತಿ ಪ್ರದಾನ ಮಾಡಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

೪. ಅಲ್ಪಸಂಖ್ಯಾತರಿಗೆ ಗುತ್ತಿಗೆಯಲ್ಲಿ ಮೀಸಲಾತಿ ವಿಚಾರ; ರಾಜ್ಯಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆಯ ಎಚ್ಚರಿಕೆ

೫. ಉತ್ತರ ಒಳನಾಡಿನಲ್ಲಿ ಇನ್ನೂ ಮೂರು ದಿನಗಳ ಕಾಲ ಬಿಸಿಹವೆ - ಹವಾಮಾನ ಇಲಾಖೆ ಮುನ್ಸೂಚನೆ

**<><*<><>*><>**

ಕಳೆದ ೨ ವರ್ಷಗಳಲ್ಲಿ ಕೇಂದ್ರ ಸರ್ಕಾರ ರಾಜ್ಯದ ನೀರಾವರಿ ಯೋಜನೆಗಳಿಗೆ ನೀಡಿರುವುದು ಕೇವಲ ೧ ಸಾವಿರದ ೩೦ ಕೋಟಿ ರೂಪಾಯಿ ಮಾತ್ರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಗೆ ತಿಳಿಸಿದ್ದಾರೆ. ರಾಜ್ಯಪಾಲರು ಮಾಡಿದ ಭಾಷಣದ ಮೇಲಿನ ಚರ್ಚೆಗೆ ಉತ್ತರ ನೀಡಿದ ಅವರು, ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದಂತೆ ನೀರಾವರಿ ಯೋಜನೆಗಳಿಗೆ ೧೦ ಸಾವಿರ ಕೋಟಿ ರೂಪಾಯಿ ಹಣವನ್ನು ಕೇಂದ್ರ ಸರ್ಕಾರ ನೀಡಿಲ್ಲ. ಮುಳವಾಡ ಏತ ನೀರಾವರಿಗೆ ೨೦೦ ಕೋಟಿ ರೂಪಾಯಿ, ಮಹಾಲಕ್ಷ್ಮಿ ಮಲಪ್ರಭಾ ಯೋಜನೆಗೆ ೨೦೦ ಕೊಟಿ ರೂಪಾಯಿ, ಭದ್ರಾ ಮೇಲ್ದಂಡೆ ಯೋಜನೆಗೆ ೩೦೦ ಕೋಟಿ ರೂಪಾಯಿ ಸೇರಿದಂತೆ ನೀರಾವರಿ ಯೋಜನೆಗಳಿಗೆ ೧ ಸಾವಿರದ ೩೦ ಕೋಟಿ ರೂಪಾಯಿ ಮಾತ್ರ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೆ ೫೦ ವರ್ಷಗಳ ಕಾಲ ಬಡ್ಡಿರಹಿತವಾಗಿ ವಿಶೇಷ ಸಹಾಯ ಯೋಜನೆಯಾಗಿ ೧೦ ಸಾವಿರ ಕೋಟಿ ರೂಪಾಯಿ ನೀಡಿದೆ. ಇದು ಕೇಂದ್ರದ

ಅನುದಾನವಲ್ಲ, ಕೇಂದ್ರದ ವಿಶೇಷ ಸಹಾಯ ಯೋಜನೆ ಎಂದು ಸದನಕ್ಕೆ ಮಾಹಿತಿ ನೀಡಿದರು. ಬಸವಣ್ಣನವರು ಹೇಳಿದಂತೆ ಸದನದಲ್ಲಿ ಚರ್ಚೆಗಳು ನುಡಿದರೆ ಮುತ್ತಿನ ಹಾರದಂತಿರಬೇಕು, ನುಡಿದರೆ ಲಿಂಗ ಮೆಚ್ಚಿ ಅಹುದಹುದು ಎನ್ನುವಂತಿರಬೇಕು. ಜನರನ್ನು ಮೆಚ್ಚಿಸುವ ಕೆಲಸ ಸದನದ ಮೂಲಕ ಆಗಬೇಕು. ವಿದ್ಯಾವಂತ ಶಾಸಕರು ಹೆಚ್ಚಾಗಿ ಸದನಕ್ಕೆ ಬರುತ್ತಿದ್ದು ಅರ್ಥಪೂರ್ಣ, ಆರೋಗ್ಯಕರ ಚರ್ಚೆಗಳಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶಾಸಕರಿಗೆ ಸಲಹೆ ನೀಡಿದ್ದಾರೆ.

<><*<><>*><>

ರೈತರ ಪಂಪ್ ಸೆಟ್ ಗಳಿಗೆ ಪ್ರತಿನಿತ್ಯ ೭ ಗಂಟೆಗಳ ಕಾಲ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ವಿಧಾನ ಪರಿಷತ್ ನಲ್ಲಿ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಬಸವನಗೌಡ ಬಾದರ್ಲಿ ಅವರ ಪರವಾಗಿ ಸದಸ್ಯ ಡಿ.ಟಿ ಶ್ರೀನಿವಾಸ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಿರಂತರವಾಗಿ ೭ ಗಂಟೆ ಕಾಲ ವಿದ್ಯುತ್ ಕೊಡಲು ಸಾಧ್ಯವಾಗದೆ ಇದ್ದರೆ ಬೆಳಿಗ್ಗೆ ಹಾಗೂ ರಾತ್ರಿ ವೇಳೆ ಕ್ರಮವಾಗಿ ೩ ಗಂಟೆ ಹಾಗೂ ೪ ಗಂಟೆಗಳಂತೆ ವಿದ್ಯುತ್ ಪೂರೈಕೆ ಮಾಡಲಾಗುತ್ತದೆ ಎಂದು ಹೇಳಿದ್ದಾರೆ. ಆಸಂಪ್ರದಾಯಿಕ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದಿಸುವುದನ್ನು ಪ್ರೋತ್ಸಾಹಿಸಲು ಸರ್ಕಾರ, ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ- ೨೦೨೨-೨೭ ನ್ನು ಜಾರಿಗೆ ತಂದಿದೆ. ರಾಯಚೂರು ಮತ್ತು ಕಲಬುರಗಿ ಯಲ್ಲಿ ಪವನ ಮತ್ತು ಸೌರ ವಿದ್ಯುತ್ ಉತ್ಪಾದನೆಗೆ ವಿಶೇಷ ಒತ್ತು ನೀಡಲಾಗುತ್ತಿದೆ ಎಂದು ಸಚಿವರು ಇದೇ ಸಂದರ್ಭದಲ್ಲಿ ಸ್ಪಷ್ಟಪಡಿಸಿದರು. ಮುಂಬರುವ ದಿನಗಳಲ್ಲಿ ಸ್ಥಳೀಯ ಮಟ್ಟದಲ್ಲಿ ಸೌರ ವಿದ್ಯುತ್ ಉತ್ಪಾದಿಸಿ ರೈತರ ಪಂಪ್ ಸೆಟ್ ಗಳಿಗೆ ಪೂರೈಸಲು ಚಿಂತನೆ ನಡೆದಿದೆ ಎಂದು ಸದನಕ್ಕು ಮಾಹಿತಿ ನೀಡಿದ್ದಾರೆ.

<><*<><>*><>

ಜಲಸಂಪನ್ಮೂಲ ಇಲಾಖೆಯಡಿ ಬರುವ "ಕರ್ನಾಟಕ ರಾಜ್ಯ ನೀರಾವರಿ ನಿಗಮ"ದಲ್ಲಿ ಅಕ್ರಮ ಮುಂಬಡ್ತಿ, ಅಕ್ರಮ ನೇಮಕಾತಿ ನಡೆದಿರುವ ಕುರಿತಂತೆ ವರದಿ ನೀಡಲು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚಿಸಿದ್ದಾರೆ. ವಿಧಾನಸಭೆಯಲ್ಲಿಂದು ನಿಯಮ ೩೫೧ರಡಿಯಲ್ಲಿ ಜೆಡಿಎಲ್‌ಪಿ ನಾಯಕ ಸುರೇಶ್ ಬಾಬು ಕೇಳಿರುವ ಪ್ರಶ್ನೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಲಿಖಿತ ಉತ್ತರ ನೀಡಿದ್ದಾರೆ. ಅಕ್ರಮ ನೇಮಕಾತಿ, ನಿಯಮ ಬಾಹಿರ ಮುಂಬಡ್ತಿ ನೀಡಿರುವುದು, ವೇತನ ಹಾಗೂ ಇನ್ನಿತರೆ ಸವಲತ್ತುಗಳನ್ನು ನಿಯಮ ಬಾಹಿರವಾಗಿ ಪಡೆದಿರುವ ಸಂಬಂಧ ಪರಿಶೀಲನೆ

ನಡೆಸಿ ವರದಿ ಸಲ್ಲಿಸುವಂತೆ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಆದೇಶ ನೀಡಲಾಗಿದೆ. ನಿಗಮದ ವ್ಯವಸ್ಥಾಪಕ ನಿರ್ದೇಶಕರು ಸಲ್ಲಿಸಿರುವ ವರದಿಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುವುದಾಗಿ ಸಚಿವರು ಲಿಖಿತ ಉತ್ತರ ನೀಡಿದ್ದಾರೆ. ಬೆಂಗಳೂರಿನ ಕರ್ನಾಟಕ ನೀರಾವರಿ ನಿಗಮದಲ್ಲಿ ೨೫ ನೌಕರರು ೨೦೦೦ ದಿಂದ ೨೦೦೭ ರವರೆಗೆ ಹೊರ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದರು. ೨೦೧೦ ರಲ್ಲಿ ನಿಗಮದ ಖಾಯಂ ನೌಕರರಾಗಿ ಸೇವೆಗೆ ಸೇರಿಕೊಂಡಿದ್ದಾರೆ.  ಈ ಸಂದರ್ಭದಲ್ಲಿ ವೇತನ ನಿಗದಿ ಮಾಡುವಾಗ ಯಾವುದೇ ವಿದ್ಯಾರ್ಹತೆ, ಅನುಭವ, ವಯಸ್ಸು ಇತರೆ ಮಾನದಂಡಗಳನ್ನು ಪರಿಗಣಿಸದೆ ನೇಮಕ ಮಾಡಿಕೊಳ್ಳಲಾಗಿದೆ ಎಂಬ ಆರೋಪ ಕೇಳಿಬಂದಿತ್ತು.

<><*<><>*><>

ರಾಜ್ಯ ಎನ್‌ಎಸ್‌ಎಸ್ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯೋಜಿಸಿದ್ದ ೨೦೨೨-೨೩ ಸಾಲಿನ ಎನ್ ಎಸ್ ಎಸ್ ರಾಜ್ಯ ಪ್ರಶಸ್ತಿಯನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರದಾನ ಮಾಡಿದರು.  ಬಳಿಕ ಮಾತನಾಡಿದ ರಾಜ್ಯಪಾಲರು, ವಿದ್ಯಾರ್ಥಿಗಳು ಅಧ್ಯಯನದ ಜೊತೆಗೆ ರಾಷ್ಟ್ರೀಯ ಸೇವಾ ಯೋಜನೆಗೆ ಸೇರಿ, ಅದನ್ನು ಒಂದು ಜನಾಂದೋಲನವನ್ನಾಗಿ ಮಾಡಬೇಕು ಎಂದು ಕರೆ ನೀಡಿದರು.  ಎನ್‌ಎಸ್‌ಎಸ್ ಸ್ವಯಂಸೇವಕರು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಸ್ವಚ್ಛತಾ ಅಭಿಯಾನ, ಆರೋಗ್ಯ ಜಾಗೃತಿ ಕಾರ್ಯಕ್ರಮಗಳ ಮೂಲಕ ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಗಮನಾರ್ಹ ಕೊಡುಗೆ ನೀಡುತ್ತಿದ್ದಾರೆ" ಎಂದು ಶ್ಲಾಘಿಸಿದರು.   ಎನ್.ಎಸ್.ಎಸ್, ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ ೨ ಅತ್ಯುತ್ತಮ ವಿಶ್ವವಿದ್ಯಾನಿಲಯ, ೨ ಅತ್ಯುತ್ತಮ ಎನ್. ಎಸ್. ಎಸ್. ಕಾರ್ಯಕ್ರಮ ಸಂಯೋಜನಾಧಿಕಾರಿ, ೧೨ ಅತ್ಯುತ್ತಮ ಎನ್. ಎಸ್. ಎಸ್. ಘಟಕ,  ೨೦ ಅತ್ಯುತ್ತಮ ಎನ್. ಎಸ್. ಎಸ್. ಸ್ವಯಂ ಸೇವಕರಿಗೆ ಒಟ್ಟು ೪೮ ಪ್ರಶಸ್ತಿಗಳನ್ನು ರಾಜ್ಯಪಾಲರು ಪ್ರಧಾನ ಮಾಡಿದರು.

<><*<><>*><>

ಗುತ್ತಿಗೆಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿ ನೀಡುವ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿದೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಅಲ್ಪಸಂಖ್ಯಾತರಿಗೆ ನೀಡಲಾಗುವ ಶೇಕಡ ೪ ರಷ್ಟು ಸರ್ಕಾರಿ ಗುತ್ತಿಗೆಯಲ್ಲಿನ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿದ್ದಾರೆ. ಮೀಸಲಾತಿ ಜಾರಿಗೆ ಸದನದಲ್ಲಿ ಮಸೂದೆ ಮಂಡಿಸಲು ಮುಂದಾದರೆ, ಭಾರತೀಯ ಜನತಾ ಪಕ್ಷ ಸದನದ ಒಳಗೆ ಹಾಗೂ ಹೊರಗೆ ಬೃಹತ್ ಪ್ರತಿಭಟನೆ

ನಡೆಸಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.ಈ ನಡುವೆ ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಚುನಾವಣಾ ಲಾಭಕ್ಕಾಗಿ ಸರ್ಕಾರ ಪರಿಶಿಷ್ಟರ ಸಾಂವಿಧಾನಕ ಹಕ್ಕುಗಳನ್ನು ಕಸಿದು, ಮುಸಲ್ಮಾನರಿಗೆ ಮೀಸಲಾತಿ ನೀಡುತ್ತಿದೆ ಎಂದು ಆರೋಪಿಸಿದ್ದಾರೆ. ಸಂವಿಧಾನದಲ್ಲಿ ಧರ್ಮಧಾರಿತ ಮೀಸಲಾತಿಗೆ ಯಾವುದೇ ಅವಕಾಶವಿಲ್ಲ ಎಂದು ಅವರು ತಿಳಿಸಿದ್ದಾರೆ.

<><*<><>*><>

ರಾಜ್ಯದ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ನಾಳೆಯಿಂದ ಇದೇ ೨೦ರವರೆಗೆ ಬಿಸಿ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಅತೀ ಹೆಚ್ಚು ತಾಪಮಾನ ೪೦ ಡಿಗ್ರಿ ಸೆಲ್ಸಿಯಸ್ ಕಲಬುರ್ಗಿಯಲ್ಲಿ ದಾಖಲಾಗಿದೆ. ಕನಿಷ್ಠ ತಾಪಮಾನ ೧೮ ಡಿಗ್ರಿ ಸೆಲ್ಸಿಯಸ್ ಮೈಸೂರಿನಲ್ಲಿ ದಾಖಲಾಗಿದೆ. ಬಾಗಲಕೋಟೆ, ಧಾರವಾಡದಲ್ಲಿ ೩೯ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ಮುಂದಿನ ಎರಡು ದಿನಗಳಲ್ಲಿ ಬೆಂಗಳೂರಿನಲ್ಲಿ ೩೫ ರಿಂದ ೩೭ ಡಿಗ್ರಿ ತಾಪಮಾನ ದಾಖಲಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್.ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ

ಬಾಗಲಕೋಟೆ, ಬೀದರ್, ಕಲಬುರಗಿ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಮುಂದಿನ ಮೂರು ದಿನಗಳು ಬಿಸಿ ಗಾಳಿಯ ಪರಿಸ್ಥಿತಿ ಹೆಚ್ಚಾಗುವ ಸಂಭವವಿದೆ. ಈ ಜಿಲ್ಲೆಗಳಲ್ಲಿ 'ಯೆಲ್ಲೊ' ಅಲರ್ಟ್ ಘೋಷಿಸಲಾಗಿದ್ದು, ಜನರು ಮುನ್ನೆಚ್ಚರಿಕೆ ವಹಿಸುವಂತೆ ಇಲಾಖೆ ತಿಳಿಸಿದೆ.

<><*<><>*><>

ಅಗ್ನಿಪಥ್ ಯೋಜನೆಯಡಿ ೨೦೨೫-೨೬ನೇ ಸಾಲಿನ ಅಗ್ನಿವೀರ್ ನೇಮಕಾತಿ ಪರೀಕ್ಷೆಗೆ ದಾವಣಗೆರೆ ಸೇರಿದಂತೆ ರಾಜ್ಯದ ೧೦ ಜಿಲ್ಲೆಗಳ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಬಾಗಲಕೋಟೆ, ಗದಗ, ವಿಜಯಪುರ, ಧಾರವಾಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಹಾವೇರಿ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಅವಿವಾಹಿತ ಪುರುಷ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಬಹುದು. ಆನ್‌ಲೈನ್ ನೋಂದಣಿಯು ಏಪ್ರಿಲ್ ೧೦ ರವರೆಗೆ ಇರಲಿದೆ. ಆನ್‌ಲೈನ್ ಪರೀಕ್ಷೆಯು ಜೂನ್ ೨೦೨೫ ರಲ್ಲಿ ನಡೆಯುವ ಸಾಧ್ಯತೆಯಿದ್ದು, ದಿನಾಂಕವನ್ನು ನಂತರ ಪ್ರಕಟಿಸಲಾಗುವುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಗನ ಕಾಯಿಲೆ ಸೋಂಕಿನಿಂದ ವೃದ್ದೆಯೊಬ್ಬರು ಇಂದು ಮೃತಪಟ್ಟಿದ್ದಾರೆ. ಕೊಪ್ಪ ತಾಲೂಕಿನ ಕಟ್ಟೆಮನೆ ಗ್ರಾಮದ ೭೫ ವರ್ಷದ ವೃದ್ದೆಯಲ್ಲಿ ಸೋಂಕು ಪತ್ತೆಯಾಗಿದ್ದು. ಚಿಕಿತ್ಸೆಗಾಗಿ ಕೊಪ್ಪ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು.

<><*<><>*><>

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜಿನ ಆವರಣದಲ್ಲಿ ಎನ್‌ಎಸ್‌ಎಸ್, ಯೂತ್ ರೆಡ್ ಕ್ರಾಸ್ ಮತ್ತು ಲಯನ್ಸ್ ಕ್ಲಬ್ ಸಹಯೋಗದಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿವರ್ಗಕ್ಕೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು. ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಆರೋಗ್ಯ ಶಿಬಿರ ಉದ್ಘಾಟಿಸಿದರು. ಈ ವೇಳ ಮಾತನಾಡಿದ ಅವರು, ವಿದ್ಯಾರ್ಥಿಗಳು ಹಾಗೂ ಬೋಧಕ- ಬೋಧಕೇತರ ಮತ್ತು ಸ್ವಚ್ಛತಾ ಸಿಬ್ಬಂದಿ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸುವಂತೆ ಸಲಹೆ ನೀಡಿದರು.

<><*<><>*><>

ಬೀದರ್ ಜಿಲ್ಲೆಯಲ್ಲಿ ನ್ಯಾಯಯುತ ಮತ್ತು ಸರಾಸರಿ ಗುಣಮಟ್ಟದ ಕುಸುಬೆಯನ್ನು ಎಂಎಸ್‌ಪಿ ದರದಲ್ಲಿ ಖರೀದಿಸಲು ಒಟ್ಟು ೯ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ. ೨೦೨೪-೨೫ನೇ ಸಾಲಿಗೆ ಕೇಂದ್ರ ಸರ್ಕಾರವು ಘೋಷಿಸಿರುವ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೀದರ್ ಜಿಲ್ಲೆಯಲ್ಲಿ ಕುಸುಬೆಯನ್ನು ಪ್ರತಿ ಕ್ವಿಂಟಾಲಿಗೆ ೫ ಸಾವಿರದ ೯೪೦ ರೂಪಾಯಿ ದರದಲ್ಲಿ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ರೈತರಿಂದ ಖರೀದಿಸಲು ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳಿ ನಿರ್ಧರಿಸಿದೆ. ಜಿಲ್ಲಾ ಕಾರ್ಯಪಡೆ ಸಮಿತಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿಗಳ ಪ್ರಕಾರ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ.

<><*<> ಇಲ್ಲಗೆ ಪ್ರದೇಶ ಸಮಾಚಾರ ಮುಗಿಯಿತು <>*><>